**Akashvani : Bangalore**
**Regional Bulletin In Kannada**
**06.12.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**06.12.2024 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಕಟ್ಟಡ ಮತ್ತು ಗಣಿಗಾರಿಕೆ ಕಲ್ಲುಗಳ ರಾಜಧನ ಹೆಚ್ಚಿಸಲು ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ**

**೨. ಆಹಾರ ಇಲಾಖೆ ಜೊತೆ ಔಷಧ ನಿಯಂತ್ರಣ ಮಂಡಳಿ ವಿಲೀನಗೊಳಿಸಿದ ರಾಜ್ಯ ಸರ್ಕಾರ**

**೩. ಬಾಣಂತಿಯರ ಸಾವಿನ ಪ್ರಕರಣ; ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ- ಲೋಕಾಯುಕ್ತಕ್ಕೆ ದೂರು ನೀಡಿದ ಬಿಜೆಪಿ**

**೪. ಕ್ವಿಂಟಲ್ ಭತ್ತಕ್ಕೆ ಹೆಚ್ಚುವರಿಯಾಗಿ ೫೦೦ ರೂಪಾಯಿ ಪ್ರೋತ್ಸಾಹ ಧನ ನೀಡುವಂತೆ ರಾಜ್ಯ ರೈತ ಸಂಘಟನೆ ಆಗ್ರಹ**

**<><*<><>*><>**

ಕಟ್ಟಡ ಮತ್ತು ಗಣಿಗಾರಿಕೆ ಕಲ್ಲುಗಳ ರಾಜಧನ ಹೆಚ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಈ ನಿರ್ಧಾರದಿಂದ ಸರ್ಕಾರಕ್ಕೆ ಹೆಚ್ಚುವರಿ ಆದಾಯ ಲಭಿಸಲಿದೆ. ಅಲ್ಪಸಂಖ್ಯಾತ ಶಿಕ್ಷಣ ಕಾಯಿದೆ ತಿದ್ದುಪಡಿಗೆ ಅನುಮೋದನೆ ನೀಡಲಾಗಿದೆ. ಮುಸ್ಲಿಂ ಮಾತ್ರವಲ್ಲದೇ ಕ್ರಿಶ್ಚಿಯನ್ ಶಿಕ್ಷಣ ಸಂಸ್ಥೆಗಳಿಗೂ ಷರತ್ತು ಅನ್ವಯವಾಗಲಿದೆ.  ವಿಶ್ವಬ್ಯಾಂಕ್ ನೆರವಿನಲ್ಲಿ ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳ ಉನ್ನತೀಕರಣಕ್ಕೆ ೧ ಸಾವಿರದ ೫೦೦ ಕೋಟಿ ರೂಪಾಯಿ ಕಾರ್ಯಕ್ರಮ ಯೋಜನೆ ರೂಪಿಸಲಾಗಿದೆ. ವಿಶ್ವ ಬ್ಯಾಂಕ್‌ನಿಂದ ೧ ಸಾವಿರದ ೭೫೦ ಕೋಟಿ ರೂಪಾಯಿ ಹಣ ಸಾಲ ಪಡೆಯಲು ನಿರ್ಧರಿಸಿಲಾಗಿದೆ. ಬಳ್ಳಾರಿಯಲ್ಲಿ ಬಾಣಂತಿಯರ ಸಾವಿರ ಪ್ರಕರಣದ ಹಿನ್ನೆಲೆಯಲ್ಲಿ ಔಷಧ ನಿಯಂತ್ರಣ ಇಲಾಖೆ ಹಾಗೂ ಆಹಾರ ಸುರಕ್ಷತೆ ಗುಣಮಟ್ಟ ಇಲಾಖೆಗಳನ್ನು ವಿಲೀನಗೊಳಿಸಲು ಸಂಪುಟ ಸಭೆ ತೀರ್ಮಾನಿಸಿದೆ. ಸಮಾಜಕಲ್ಯಾಣ ಇಲಾಖೆ ವ್ಯಾಪ್ತಿಯ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಪೌಷ್ಠಿಕ ಆಹಾರವನ್ನು ೪೩ ಕೋಟಿ ೬೫ ಲಕ್ಷ ರೂಪಾಯಿ ವೆಚ್ಚದಲ್ಲಿ ಒದಗಿಸಲು ತೀರ್ಮಾನಿಸಲಾಗಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

**ಧ್ವನಿ: ಎಚ್.ಕೆ.ಪಾಟೀಲ್**

**<><*<><>*><>**

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಸಿಜೇರಿಯನ್ ಮೂಲಕ ಹೆರಿಗೆಯಾದ ಬಳಿಕ ಆರೋಗ್ಯದಲ್ಲಿ ಏರುಪೇರಾಗಿ ನಿನ್ನೆ ರಾತ್ರಿ ಬಾಣಂತಿಯೊಬ್ಬರು ಸಾವನ್ನಪ್ಪಿದ್ದಾರೆ. ಇದರೊಂದಿಗೆ ಬಿಮ್ಸ್‌ನಲ್ಲಿ ಸಾವನ್ನಪ್ಪಿದ ಬಾಣಂತಿಯರ ಸಂಖ್ಯೆ ೫ಕ್ಕೆ ಏರಿಕೆಯಾಗಿದೆ. ಈ ಕುರಿತಂತೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಪ್ರಕರಣದಲ್ಲಿ ತಪ್ಪಿಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಸರ್ಕಾರದಲ್ಲಿ ಇಂತಹ ಘಟನೆಗಳಿಗೆ ಅವಕಾಶವಿಲ್ಲ ಎಂದು ತಿಳಿಸಿದ್ದಾರೆ.  ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿನ ಬಾಣಂತಿಯರ ಸಾವು ಪ್ರಕರಣವನ್ನು ಸರ್ಕಾರ ಗಂಭೀರವಾಗಿ

ಪರಿಗಣಿಸಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪ್ರಕರಣದಲ್ಲಿ ತಮ್ಮ ತಪ್ಪಿದ್ದರೆ ರಾಜೀನಾಮೆ ನೀಡಲು ಸಿದ್ಧ ಎಂದು ಸ್ಪಷ್ಟಪಡಿಸಿದ್ದಾರೆ.

<><*><><>*><>

ಬಳ್ಳಾರಿಯ ಬಿಮ್ಸ್ ಆಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ನಿಯೋಗ ಇಂದು ಲೋಕಾಯುಕ್ತಕ್ಕೆ ದೂರು ನೀಡಿದೆ. ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತು ಶಾಸಕ ಸಿಕೆ ರಾಮಮೂರ್ತಿ ಮತ್ತು ಪರಿಷತ್ ಸದಸ್ಯ ರವಿಕುಮಾರ್ ಒಳಗೊಂಡ ನಿಯೋಗ ಬೆಂಗಳೂರಿನ ಲೋಕಾಯುಕ್ತ ಕಚೇರಿಗೆ ಭೇಟಿ ನೀಡಿ  ಬಾಣಂತಿಯರ ಸಾವಿನ ಪ್ರಕರಣದ ಬಗ್ಗೆ ತನಿಖೆ ನಡೆಸುವಂತೆ ದೂರು ನೀಡಿದೆ. ದೂರಿನಲ್ಲಿ ಆರೋಗ್ಯ ಸಚಿವರ ರಾಜೀನಾಮೆ ನೀಡುವಂತೆ ಬಿಜೆಪಿ ಆಗ್ರಹಿಸಿದೆ. ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆ ನಡೆಸುವಂತೆ ಹಾಗೂ  ಆರೋಗ್ಯ ಇಲಾಖೆಯಲ್ಲಿ ಸುಧಾರಣೆ ತರುವುದರ ಜೊತೆ ಸಾವನ್ನಪ್ಪಿದವರ ಕುಟುಂಬಕ್ಕೆ ಪರಿಹಾರ ನೀಡುವಂತೆ ಒತ್ತಾಯಿಸಿದೆ.

<><*><><>*><>

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವು ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಆರೋಪಿಸಿದ್ದಾರೆ.  ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಅವರು, ಘಟನೆ ಜರುಗಿದ ಬಳಿಕವೂ ಆರೋಗ್ಯ ಸಚಿವರಾಗಲಿ, ವೈದ್ಯಕೀಯ ಶಿಕ್ಷಣ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಯಾರೊಬ್ಬರೂ ಜಿಲ್ಲೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಬಳ್ಳಾರಿಯಲ್ಲಿ ಬಾಣಂತಿಯರ ಸಾವಿಗೆ ಸರ್ಕಾರ ಕಿಂಚಿತ್ತೂ ಕಾಳಜಿ ತೋರದಿರುವುದು ದುರದೃಷ್ಟಕರ ಎಂದು ಹೇಳಿದ್ದಾರೆ.

<><*><><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ದತ್ತ ಜಯಂತಿ ಕಾರ್ಯಕ್ರಮದ ಅಂಗವಾಗಿ ಕಾಮಧೇನು ಗಣಪತಿ ದೇವಾಲಯದಲ್ಲಿ ದತ್ತ ಮಾಲೆ ಧಾರಣೆ ಕಾರ್ಯಕ್ರಮ ನಡೆಯಿತು. ಬಿ.ಜೆ.ಪಿ ಮುಖಂಡ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಸೇರಿದಂತೆ ಆನೇಕ ಗಣ್ಯರು ದತ್ತ ಮಾಲೆ ಧಾರಣೆ ಮಾಡಿದರು. ಇದೇ ೧೨ ರಂದು ಅನುಸೂಯ ಜಯಂತಿ, ೧೩ ರಂದು ಶೋಭಾ ಯಾತ್ರೆ, ೧೪ ರಂದು ದತ್ತ  ಪೀಠದಲ್ಲಿ ದತ್ತಜಯಂತಿ ಉತ್ಸವ ನಡೆಯಲಿದ್ದು, ಜಿಲ್ಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ. ನಗರದ ವಿವಿಧೆಡೆ ಪೊಲೀಸ್ ಸಿಬ್ಬಂದಿ ಪಥ ಸಂಚಲನ ನಡೆಸಿದ್ದಾರೆ. ಅಲ್ಲದೆ ಉತ್ಸವ ನಡೆಯುವ ೧೨ ರಿಂದ ೧೪ ರವರೆಗೂ ಜಿಲ್ಲೆಯಲ್ಲಿ ಮಧ್ಯ ಮಾರಾಟ ನಿಷೇಧಿಸಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ.

<><*><><>*><>

ಕೃಷ್ಣಾ ಅಚ್ಚುಕಟ್ಟು ಪ್ರದೇಶದಲ್ಲಿ ಹೆಚ್ಚಾಗಿ ಬೆಳೆಯುವ ಭತ್ತದ ಬೆಲೆ ಕುಸಿತವಾಗಿದೆ. ಕೂಡಲೇ ಜಿಲ್ಲಾಧಿಕಾರಿಗಳು, ಜನಪ್ರತಿನಿಧಿಗಳು ಖರೀದಿ ಕೇಂದ್ರ ಆರಂಭಿಸಲು ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಕುರುಬೂರು ಶಾಂತಕುಮಾರ ಆಗ್ರಹಿಸಿದ್ದಾರೆ.  ಯಾದಗಿರಿ ಜಿಲ್ಲೆಯಲ್ಲಿ ರೈತರ ಸಮಸ್ಯೆಗಳ

ಕುರಿತು ನಡೆಸಿದ ಜಾಗೃತಿ ಸಮಾವೇಶದಲ್ಲಿ ಮಾತನಾಡಿದ ಅವರು, ಸರ್ಕಾರ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಖರೀದಿ ಕೇಂದ್ರಗಳನ್ನು ತೆರೆದು ಕನಿಷ್ಠ ಬೆಂಬಲ ಬೆಲೆ ೨ ಸಾವಿರದ ೨೮೦ ರೂಪಾಯಿ ಜತೆಗೆ ಹೆಚ್ಚುವರಿಯಾಗಿ ೫೦೦ ರೂಪಾಯಿ ಪ್ರೋತ್ಸಾಹಧನ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಇದೇ ವೇಳೆ ಕಬ್ಬಿಗೆ ನ್ಯಾಯಯುತ ಬೆಲೆ ನಿಗದಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ. ನಬಾರ್ಡ್‌ಗೆ ನೀಡುತ್ತಿದ್ದ ಶೇಕಡ ೫೦ರಷ್ಟು ಅನುದಾನ ಕಡಿತ ಮಾಡುವ ಮೂಲಕ ರೈತರಿಗೆ ಸಹಕಾರ ಸಂಘಗಳಲ್ಲಿ ನೀಡುತ್ತಿದ್ದ ಬಡ್ಡಿ ರಹಿತ ಕೃಷಿ ಸಾಲ ತಪ್ಪಿಸುವ ಹುನ್ನಾರ ನಡೆಸಲಾಗಿದೆ ಎಂದು ಆರೋಪಿಸಿದ್ದಾರೆ.

**<><*<><>*><>**

ಬೆಂಗಳೂರಿನ ಬಿವಿಕೆ ಅಯ್ಯಂಗರ್ ರಸ್ತೆಯಲ್ಲಿ ನಡೆಯುತ್ತಿರುವ ವೈಟ್ ಟಾಪಿಂಗ್ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬಿಬಿಎಂಪಿ ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಇದೇ ೧೫ ರೊಳಗಾಗಿ ಬಾಕಿ ಕಾಮಗಾರಿ ಪೂರ್ಣಗೊಳಿಸಿ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಲು ತಿಳಿಸಿದ್ದಾರೆ. ಕಾಮಗಾರಿ ಪೂರ್ಣಗೊಂಡ ಬಳಿಕ ರಸ್ತೆ ಮಧ್ಯೆಯಿರುವ ಹಳೆಯ ಮೀಡಿಯನ್ ಗಳನ್ನು ತೆಗೆದು, ಹೊಸದಾಗಿ ಪ್ರೀಕಾಸ್ಟ್ ಮೀಡಿಯನ್ಸ್ ಗಳನ್ನು ಅಳವಡಿಸಬೇಕು. ಪಾದಚಾರಿ ಮಾರ್ಗ ಒಂದೇ ಸಮನಾಗಿರುವಂತೆ ಮಾಡಬೇಕು ಎಂದು ತಿಳಿಸಿದ್ದಾರೆ.

**<><*<><>*><>**

ಹಸಿ ಮತ್ತು ಒಣ ತ್ಯಾಜ್ಯ ವಿಂಗಡಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ಜೊತೆಗೆ ತ್ಯಾಜ್ಯವನ್ನು ರೈತರ ಜಮೀನುಗಳಲ್ಲೇ ಸಾವಯವ ಗೊಬ್ಬರವನ್ನಾಗಿಸಿ ಉಚಿತವಾಗಿ ವಿತರಿಸುತ್ತಿರುವ ಚಿಕ್ಕಬಳ್ಳಾಪುರ ನಗರಸಭೆಯ ಕಾರ್ಯವನ್ನು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಶ್ಲಾಘಿಸಿ ನಗರಸಭೆಗೆ ಪತ್ರ ಬರೆದಿದ್ದಾರೆ. ’ಸ್ವಚ್ಛ ಭಾರತ್ ಮಿಷನ್’ ಯೋಜನೆಯ ಪ್ರಮುಖ ಉದ್ದೇಶ ನಗರಗಳಲ್ಲಿ ದಿನನಿತ್ಯ ಉತ್ಪಾದನೆಯಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ಸ್ವಚ್ಛ ಮತ್ತು ಸುಂದರವಾಗಿ ಇಡುವುದಾಗಿದೆ. ಈ ನಿಟ್ಟಿನಲ್ಲಿ ಚಿಕ್ಕಬಳ್ಳಾಪುರ ನಗರಸಭೆ ವ್ಯಾಪ್ತಿಯಲ್ಲಿ ದಿನನಿತ್ಯ ಉತ್ಪಾದನೆಯಾಗುವ ಹಸಿ ತ್ಯಾಜ್ಯವನ್ನು ಖಾಸಗಿ ಸಂಸ್ಥೆಗಳ ಸಹಯೋಗದೊಂದಿಗೆ ಸುತ್ತಮುತ್ತಲಿನ ರೈತರ ಜಮೀನಿನಲ್ಲಿ ಪಿಟ್ ಗಳನ್ನು ನಿರ್ಮಿಸಿ, ವಿಕೇಂದ್ರೀಕೃತವಾಗಿ ಹಸಿ ತ್ಯಾಜ್ಯ ನಿರ್ವಹಣೆ ಮಾಡುತ್ತಿರುವುದು ಶ್ಲಾಘನೀಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ನಗರಸಭೆ ಅಧಿಕಾರಿಗಳಿಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

**<><*<><>*><>**

ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ವಿಡಿಯೋ ಸಂವಾದದ ಮೂಲಕ ಜಿಲ್ಲಾ ಮಟ್ಟದ ಬೆಳೆ ಕಟಾವು, ಕೃಷಿ ಅಂಕಿ- ಅಂಶ ಹಾಗೂ ೧೧ ನೇ ಕೃಷಿ ಗಣತಿ ಸಮಿತಿಗಳ ಸಮನ್ವಯ ಸಮಿತಿ ಸಭೆ ನಡೆಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ, ೧೧ನೇ ಕೃಷಿ ಗಣತಿಯ ದತ್ತಾಂಶ ಪ್ರಗತಿಯು ಜಿಲ್ಲೆಯಲ್ಲಿ ಕಡಿಮೆ ಇದ್ದು, ಎಲ್ಲಾ ತಹಶಿಲ್ದಾರರು ಕೂಡಲೆ ಕ್ರಮ ಕೈಗೊಳ್ಳಿ ಎಂದು ಸೂಚಿಸಿದ್ದಾರೆ.

**<><*<><>*><>**

ರಾಜ್ಯಾದ್ಯಂತ ಇಂದು ಸಂವಿಧಾನ ಶಿಲ್ಪಿ, ಭಾರತರತ್ನ, ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರ ೬೮ನೇ ಮಹಾ ಪರಿನಿರ್ವಾಣ ದಿನ ಆಚರಿಸಲಾಯಿತು. ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯಗಳನ್ನು ಜನರಿಗೆ ತಲುಪಿಸುವ ಪ್ರಾಮಾಣಿಕ ಕಳಕಳಿ ಇರುವುದು ಬಿಜೆಪಿಗೆ ಮಾತ್ರ. ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೆಂಗಳೂರಿನಲ್ಲಿ ತಿಳಿಸಿದ್ದಾರೆ. ಬಳ್ಳಾರಿ ಜಿಲ್ಲಾಡಳಿತದಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಗೌರವ ನಮನ ಸಲ್ಲಿಸಲಾಯಿತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಹಾಸನದಲ್ಲಿ ಸಂವಿಧಾನ ಶಿಲ್ಪಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಡೆಯುವ ಮೂಲಕ ಎಲ್ಲರೂ ಅವರ ತತ್ವ ಆದರ್ಶಗಳನ್ನು ಪಾಲಿಸೋಣ ಎಂದು ಶಾಸಕ ಸ್ವರೂಪ ಪ್ರಕಾಶ್ ತಿಳಿಸಿದರು. ಸ್ವಾತಂತ್ರ್ಯ, ಸಮಾನತೆ ಮತ್ತು ಸ್ವಾಭಿಮಾನಕ್ಕಾಗಿ ಹೋರಾಟ ಮಾಡಿ ದೇಶದ ಅಪ್ರತಿಮ ಹೋರಾಟಗಾರ, ಭಾರತ ರತ್ನ ಅಂಬೇಡ್ಕರ್ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಹೇಳಿದ್ದಾರೆ. ವಿಶ್ವಕ್ಕೆ ಮಾನವೀಯತೆ ಮತ್ತು ಸಮಾನತೆಯ ಸಂದೇಶ ಸಾರಿದ ಅಂಬೇಡ್ಕರ್ ಅವರ ಆದರ್ಶ ಗುಣಗಳುಳ್ಳ ವ್ಯಕ್ತಿಗಳು ಪ್ರತಿ ಮನೆಯಲ್ಲೂ ಜನಿಸಬೇಕು ಎಂದು ತುಮಕೂರು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ. ಕೋಲಾರ ನಗರದ ನಚಿಕೇತನ ನಿಲಯದಲ್ಲಿ ಜೆಡಿಎಸ್ ಜಿಲ್ಲಾ ಎಸ್ಸಿ ಘಟಕದ ವತಿಯಿಂದ ಅಂಬೇಡ್ಕರ್ ೬೮ ನೇ ಪರಿನಿರ್ವಾಣ ದಿನದ ಪ್ರಯುಕ್ತ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು.

**<><*<><>*><>**

**ಇನ್ನು ಸಂಕ್ಷಿಪ್ತ ಸುದ್ದಿ....**

೧. ಬೆಂಗಳೂರಿನ ಚಾಮರಾಜಪೇಟೆ ಜೆಜೆಆರ್ ಜನರಲ್ ಆಸ್ಪತ್ರೆಯ ಆವರಣದಲ್ಲಿ ೮ ಕೋಟಿ ವೆಚ್ಚದಲ್ಲಿ ಜನರಲ್ ಹಾಗೂ ಹೆರಿಗೆ ಆಸ್ಪತ್ರೆ ನಿರ್ಮಿಸಲಾಗುತ್ತಿದ್ದು, ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಬಿಬಿಎಂಪಿ ಆಯುಕ್ತ ತುಷಾರ್ ಗಿರೀನಾಥ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೨. ಯುವಜನರು ಎಲ್ಲ ಬಗೆಯ ದುಶ್ಚಟಗಳನ್ನು ತೊರೆದು, ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಕರೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೮.೩೫ ಕ್ಕೆ <>*><>**